# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1284
2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಠೋಡ್
3. ಉತ್ತರಿಸಬೇಕಾದ ದಿನಾಂಕ : 08.03.2022
4. ಉತ್ತರಿಸುವ ಸಚಿವರು: ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸಹಕಾರಿ ಕ್ಷೇತ್ರದ ಎಷ್ಟು ಸಕ್ಕರೆ ಕಾರ್ಖಾನೆಗಳು ನಷ್ಟದಲ್ಲಿವೆ; | ಪ್ರಸ್ತುತ ರಾಜ್ಯದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಒಟ್ಟು 14 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಎಲ್ಲಾ ಕಾರ್ಖಾನೆಗಳು ನಷ್ಟದಲ್ಲಿರುತ್ತವೆ. |
| (ಆ) | ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಲಾಭದತ್ತ ಕೊಂಡೊಯ್ಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದುಡಿಯುವ ಬಂಡವಾಳದ ಕೊರತೆ ಮತ್ತು ಆರ್ಥಿಕ ನಷ್ಟದಿಂದ ಹಾಗೂ ಇನ್ನಿತರೆ ಆಡಳಿತಾತ್ಮಕ ಕಾರಣಗಳಿಂದಾಗಿ ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಯ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಃಶ್ಚೇತನಗೊಳಿಸುವುದು ಸರ್ಕಾರದ ಪ್ರಸ್ತುತ ನೀತಿಯಾಗಿರುತ್ತದೆ.<br>ಅದರಂತೆ ಇದುವರೆಗೆ 9 ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು LROT (Lease Rehabilitate Operate Transfer) ಮತ್ತು BOOT (Build Own Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆ. ಆ ಮೂಲಕ ರೈತರ ಮತ್ತು ಕಾರ್ಮಿಕರ ಹಿತ ಕಾಪಾಡುವುದರೊಂದಿಗೆ ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲಾಗಿದೆ.<br>ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ನಷ್ಟದಲ್ಲಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲು ಸರ್ಕಾರದಿಂದ ಬಡ್ಡಿರಹಿತ ಸಾಲ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| (ಇ) | ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರದಿಂದ ಬಡ್ಡಿರಹಿತ ಸಾಲ ನೀಡಿ, ಕಾರ್ಖಾನೆಗಳ ಅಭಿವೃದ್ಧಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | |

ಸಂಖ್ಯೆ: ಸಿಐ 64 ಸಿಓಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು